ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತೊಂದನೆಯ ಅಧಿವೇಶನ
ಸೋಮವಾರ, ದಿನಾಂಕ : 28 ನೇ ಸೆಪ್ಟೆಂಬರ್, 2020

ಹಿಂದುಳಿದ ವರ್ಗಗಳ ಸಮುದಾಯದವರಿಗೆ ಮೀಸಲಾತಿ ನೀಡುವ ಬಗ್ಗೆ

ಶ್ರೀ ಕೆ.ಪಿ. ನಂಜುಂಡಿ ವಿಶ್ವಕರ್ಮ (ವಿಧಾನಸಭೆಯಿಂದ ಚುನಾಯಿತರಾದವರು)-

87 (853) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಪರಿಶಿಷ್ಟ ಜಾತಿ ಮತ್ತು ವರ್ಗಗಳಿಗೆ ಎಲ್ಲಾ ರೀತಿಯ ಕಾಮಗಾರಿಗಳಲ್ಲೂ 7% ಮೀಸಲಾತಿ ಅಥವಾ ಪ್ರಾತಿನಿಧ್ಯ ನೀಡಿರುವ ರೀತಿ ಹಿಂದುಳಿದ ವರ್ಗಗಳ ಸಮುದಾಯಗಳಿಗೆ ಏತಕ್ಕಾಗಿ ಕೊಡಬಾರದು; ಹಾಗೆ ಕೊಡಲು ಏನಾದರೂ ಅಡಚಣೆಗಳಿವೆಯೇ;

(ಆ) ಗಣಿ ಮತ್ತು ಮರಳು ತೆಗೆಯುವ ಕ್ಷೇತ್ರ ಹಾಗೂ ಅಬಕಾರಿ ಲೈಸೆನ್ಸ್ ನೀಡುವಲ್ಲಿ ಪರಿಶಿಷ್ಟ ಜಾತಿ ಮತ್ತು ವರ್ಗಗಳಿಗೆ ಇರುವ ಮೀಸಲಾತಿಯನ್ನು ಹಿಂದುಳಿದ ವರ್ಗಗಳಿಗೆ ಪರಿಗಣಿಸದಿರಲು ಕಾರಣಗಳೇನು ?